ಕೃಷಿ ವಿಶ್ವವಿದ್ಯಾನಿಲಯ, ಬೆಂಗಳೂರು

ಕೃಷಿ ಹವಾಮಾನ ವಿಭಾಗ, ಜಿ.ಕೆ.ವಿ.ಕೆ, ಬೆಂಗಳೂರು-65

ಪಟ್ರೇನಹಳ್ಳಿಯ ಕೃಷಿ ಹವಾಮಾನ ಮುನ್ಸೂಚನೆ

ದಿನಾಂಕ: 18.08.15

ಈ ವಾರದ ಮುನ್ಸೂಚನೆ (19-08-15 to 23.08.15 ವರೆಗೆ)

ನಿಯತಾಂಕಗಳು	19/8/15/	20/8/15	21/8/15	22/8/15	23/8/15
ಮಳೆ (ಮಿ ಮಿ)	10	12	14	7	9
ಗರಿಷ್ಠ ಉಷ್ಣಾಂಶ(ಡಿ.ಸೆ.)	31	31	31	29	29
ಕನಿಷ್ಠ ಉಷ್ಣಾಂಶ (ಡಿ.ಸೆ.)	21	21	21	21	21
ಮೋಡ (ಪ್ರಮಾಣ)	5	7	8	8	8
ಆರ್ದ್ರತೆ ೭.೨೦ ಬೆ (ಶೇ)	84	82	84	85	84
ಆರ್ದ್ರತೆ ೨.೨೦ ಮ (ಶೇ)	59	58	61	55	58
ಗಾಳಿಯ ವೇಗ (ಕಿ.ಮಿ/ಗಂಟೆಗೆ)	9	9	10	8	12
ಗಾಳಿಯ ದಿಕ್ಕು (ಡಿಗ್ರಿ)	320	250	300	270	270

ಭಾರತೀಯ ಹವಾಮಾನ ಇಲಾಖೆಯ ಮುನ್ಸೂಚನೆಯ ಪ್ರಕಾರ ಚಿಕ್ಕಬಳ್ಳಾಪುರ ಹಾಗೂ ಸುತ್ತಮುತ್ತ ಮುಂದಿನ ಐದು ದಿನಗಳು ಹಗುರವಾದ ಮಳೆಯ ನಿರೀಕ್ಷೆ ಇದೆ. ದಿನದ ಗರಿಷ್ಠ ಉಷ್ಣಾಂಶವು **29-31.0°C** ಮತ್ತು ಕನಿಷ್ಠ **21°C** ಇರಲಿದೆ. ಬೆಳಗಿನ ಆರ್ದ್ರತೆ ಪ್ರಮಾಣ ಶೇ **82-85%** ಇದ್ದು, ಮಧ್ಯಾಹ್ನ **55-61%** ಇರುವುದು ಮತ್ತು ಗಾಳಿಯು ಗಂಟೆಗೆ ಸರಾಸರಿ **8-12** ಕಿ.ಮೀ.ವೇಗದಲ್ಲಿ ಬೀಸುವ ಸಂಭವವಿದೆ.

ಕೃಷಿ ಕಾರ್ಯಕ್ರಮಗಳ ಬಗ್ಗೆ ಅನುಸರಿಸಬೇಕಾದ ವಿವರ

- ✓ **ಅಲ್ಪಾವಧಿ ಬೆಳೆಗಳಾದ ಹುರುಳಿ, ಅಲಸಂದೆ, ಸಜ್ಜೆ, ಉದ್ದು, ನವಣೆ, ಎಳ್ಳು, ಸಾಮೆ, ಹೆಸರು ಬೆಳೆಗಳನ್ನು ಬೆಳೆಯಬಹುದು**
- ✓ **ರಾಗಿ ಬೆಳೆ0ಯಲ್ಲಿ ಸಸಿಗಳ ಸಂಖ್ಯೆಯನ್ನು ಶಿಪಾರಸ್ಸು ಮಾಡಿದ ಸಂಖ್ಯೆಯಲ್ಲಿ ಉಳಿಸಿಕೊಳ್ಳುವುದು ಇದರಿಂದ ತೇವಾಂಶ ಸದ್ಬಳಕೆಯಾಗುವುದು.**

ಆಗಸ್ಟ್ ತಿಂಗಳಲ್ಲಿ ಬಿತ್ತನೆ ಮಾಡಬೇಕಾದ ಬೆಳೆಗಳು:

ರಾಗಿ: ಜಿ.ಪಿ.ಯು-28, ಹೆಚ್.ಆರ್.-911, ಇಂಡಾಫ್ಲ್-೨೮, ಎಮ್.ಎಲ್-೩೬೫, ಎಮ್.ಆರ್-೧, ೨, ೬.

ಪಾಪ್‌ಕಾರ್ನ್: ಅಂಬರ್. ಅಲಸಂದೆ: ಟಿ.ವಿ.ಎಕ್ಸ್-೯೪೪, ಕೆ.ಎಮ್-5, ಅಥವಾ ತರಕಾರಿಗಾಗಿ ಪಿ.ಕೆ.ಬಿ-4 ತಳಿಯನ್ನು ಆಯ್ಕೆ ಮಾಡಿಕೊಳ್ಳಬಹುದು.

ಸಸ್ಯ ಸಂರಕ್ಷಣೆ:

- ✓ **ರಸ ಹೀರುವ ಕೀಟಗಳು:** ಇವುಗಳ ಹತೋಟಿಗೆ ಶೇ. 4ರಷ್ಟು ಬೇವಿನ ಕಷಾ0ಯವನ್ನು ಸಿಂಪಡಿಸಬೇಕು ಅಥವಾ ಬೇವಿನ ಎಣ್ಣೆಯನ್ನು ಸಿಂಪಡಿಸಬೇಕು. ನೀರನ್ನು ರಭಸವಾಗಿ ಸಿಂಪಡಣೆ ಮಾಡುವುದರಿಂದಲೂ ಏಫಿಡ್ಸ್ (ಹೇನುಗಳು) ಹಾಗೂ ಇನ್ನಿತರೆ ರಸಹೀರುವ ಕೀಟಗಳನ್ನು ಹತೋಟಿಯಲ್ಲಿಡಬಹುದು. ಅಂಟು ದ್ರಾವಣವನ್ನು ಲೇಪಿಸಿದ ಹಳದಿ ಬಣ್ಣದ ಅಂಟು ಬಲೆಗಳನ್ನು ಅಲ್ಲಲ್ಲಿ ಇಡುವುದರಿಂದ ಬಿಳಿನೊಣ, ರೆಕ್ಕೆ ಇರುವ ಏಫಿಡ್ಸ್ ಹಾಗೂ ಇನ್ನಿತರೆ ಕೀಟಗಳು ಆಕರ್ಷಣೆಗೊಂಡು ಆ ಬಲೆಗೆ ಅಂಟಿಕೊಳ್ಳುತ್ತವೆ.

ನೋಡಲ್ ಅಧಿಕಾರಿ:
ಕೃಷಿ ಹವಾಮಾನ ವಿಭಾಗ
ಕೃಷಿ ವಿಶ್ವವಿದ್ಯಾನಿಲಯ, ಬೆಂಗಳೂರು